ದಿ:19/08/2025ರಂದು (110)
(31.12)
1561-72-12

<u>ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ. ಉಮಾಶ್ರೀ ಇವರ</u>
<u>ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಉತ್ತರ.</u>

**ಪ್ರಶ್ನೆ:**

ಮೈಸೂರು ವಿಶ್ವವಿದ್ಯಾಲಯದಲ್ಲಿ ಪಿ.ಎಚ್.ಡಿ ಸಾಮಾನ್ಯ ಪ್ರವೇಶ ಪರೀಕ್ಷೆ ತೇರ್ಗಡೆಯಾಗಿ ಅರ್ಹತೆ ಪಡೆದ ಎಲ್ಲಾ ವರ್ಗದ ಸುಮಾರು 1500 ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರ ಕೊರತೆಯಿಂದಾಗಿ ಡಾಕ್ಟರೇಟ್ ಕನಸು ಕಾಣುತ್ತಿದ್ದ ವಿದ್ಯಾರ್ಥಿಗಳ ಭವಿಷ್ಯ ಡೋಲಾಯಮಾನವಾಗಿದೆ. ಇದರಿಂದ ಸಂಶೋಧನಾ ಕ್ಷೇತ್ರಕ್ಕೆ ಬಹುದೊಡ್ಡ ಹೊಡೆತ ಬಿದ್ದಿರುತ್ತದೆ ಮತ್ತು ಈ ವಿಚಾರವಾಗಿ ವಿದ್ಯಾರ್ಥಿಗಳು ಪ್ರತಿಭಟನೆ ಮಾಡಿರುತ್ತಾರೆ. ಸರ್ಕಾರ ಖಾಯಂ ಬೋಧಕರನ್ನು ನೇಮಕ ಮಾಡಿದರೆ ಮಾತ್ರ ಈ ಸಮಸ್ಯೆಗೆ ಪರಿಹಾರ ಸಿಗುತ್ತದೆ ಎಂಬ ಒಂದೇ ಕಾರಣ ಹೇಳುವ ವಿಶ್ವವಿದ್ಯಾಲಯವು ತಮ್ಮ ವ್ಯಾಪ್ತಿಯಲ್ಲೇ ಈ ವಿಚಾರ ಕುರಿತಂತೆ ಪರಿಹಾರ ಕಂಡುಹಿಡಿದುಕೊಳ್ಳುವ ಅವಕಾಶಗಳಿದ್ದರೂ, ಅಂತಹ ಅವಕಾಶಗಳನ್ನು ಬಳಸಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸದೆ ವಿದ್ಯಾರ್ಥಿಗಳ ಭವಿಷ್ಯವನ್ನು ಕತ್ತಲೆಗೆ ದೂಡಿರುವ ಕುರಿತು ಸರ್ಕಾರದ ಗಮನಸೆಳೆಯ ಬಯಸುತ್ತೇನೆ.

**ಉತ್ತರ:**

ಮೈಸೂರು ವಿಶ್ವವಿದ್ಯಾನಿಲಯವು ದಿನಾಂಕ:23.12.2024 ಹಾಗೂ 24.12.2024ರಂದು ಪಿಎಚ್.ಡಿ. ಪದವಿಗೆ ನೋಂದಣಿ ಮಾಡಿಕೊಳ್ಳಲು ವಿವಿಧ ವಿಷಯಗಳಲ್ಲಿ ಪ್ರವೇಶ ಪರೀಕ್ಷೆಗಳನ್ನು ಆಯೋಜಿಸಿ ದಿನಾಂಕ: 03.03.2025 ಫಲಿತಾಂಶ ಪ್ರಕಟಿಸಿದೆ. ಪಿಎಚ್.ಡಿ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಪಡೆದ 186 ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯವನ್ನು ಒಳಗೊಂಡಂತೆ ತನ್ನ ವ್ಯಾಪ್ತಿಯಲ್ಲಿ ಬರುವ ವಿವಿಧ ಸಂಯೋಜಿತ ಕಾಲೇಜುಗಳಿಂದ ಅರ್ಹ ಮಾರ್ಗದರ್ಶಕರಾಗಿ ಪಡೆಯಲು ಕ್ರಮವಹಿಸಿದೆ.

ಪಿ.ಎಚ್.ಡಿ ನೋಂದಣಿ ಮಾಡಿಕೊಳ್ಳಲು ಮಾರ್ಗದರ್ಶಕರ ಬಳಿ ಅಭ್ಯರ್ಥಿಗಳ ಲಭ್ಯತೆ ಖಾಲಿ ಇದ್ದಲ್ಲಿ, ಅರ್ಹ ಅಭ್ಯರ್ಥಿಗಳು ಅಂತಹ ಮಾರ್ಗದರ್ಶಕರಿಂದ ಸಮ್ಮತಿ ಪತ್ರ ಪಡೆದು, ಸಲ್ಲಿಸಿದ್ದಲ್ಲಿ ವಿಶ್ವವಿದ್ಯಾನಿಲಯವು ಅಂತಹ ವಿದ್ಯಾರ್ಥಿಗಳಿಗೆ ಪ್ರಥಮವಾಗಿ ತಾತ್ಕಾಲಿಕ ನೋಂದಣಿಗೆ ಅನುಮತಿ ನೀಡಲು ಕ್ರಮವಹಿಸುತ್ತಿದೆ. ವಿಶ್ವವಿದ್ಯಾನಿಲಯವು ನಡೆಸುವ ಪಿಎಚ್.ಡಿ. ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳ ಪ್ರಮಾಣ ಪತ್ರಕ್ಕೆ ಮೂರು ವರ್ಷಗಳವರೆಗೆ ಮಾನ್ಯತೆಯಿದ್ದು, ಆಯಾ ಮಾರ್ಗದರ್ಶಕರ ಅಡಿಯಲ್ಲಿ ಖಾಲಿಯಾಗುವ ಎದುರಿಗೆ ಅವರ ಸಮ್ಮತಿ ಪತ್ರದೊಡನೆ ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ವಿಶ್ವವಿದ್ಯಾಲಯವು ಅವಕಾಶ ಕಲ್ಪಿಸಿರುತ್ತದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ 33 ಅಧ್ಯಯನ ಮಂಡಳಿ (Board of Studies) ರನ್ವಯ ವಿಶ್ವವಿದ್ಯಾಲಯವು ಪದವಿ ಪೂರ್ವ ಅಧ್ಯಯನಗಳಿಗಾಗಿ ಮತ್ತು ಸ್ನಾತಕೋತ್ತರ ಅಧ್ಯಯನಗಳಿಗಾಗಿ ಪ್ರತ್ಯೇಕ ಅಧ್ಯಯನ ಮಂಡಳಿಯಿದ್ದು, UGC (Minimum Standards and Procedures for Award of Ph.D Degree) Regulations, 2022ರಲ್ಲಿ ಸಂಶೋಧನಾ ಮೇಲ್ವಿಚಾರಕರಿಗೆ ಸಂಬಂಧಿಸಿದಂತೆ, ಈ ಕೆಳಕಂಡ ನಿಯಮಗಳನ್ನು ಉಪಬಂಧಿಸಲಾಗಿರುತ್ತದೆ;

**Adjunct Faculty members shall not act as Research Supervisors and can only act as co-supervisors;**

(1) An eligible Professor/Assistant Professor can guide up to eight (8)/six (06)/ four (04), Ph.D scholars, respectively, at any given time.

(2) In case of interdisciplinary/ multidisciplinary research work, if required, a Co-Supervisor from outside the Department/School/Centre/University may be appointed.

......2

Scanned with CamScanner

ಮೇಲ್ಕಂಡ ಮಾರ್ಗಸೂಚಿಯನ್ವಯ ವಿಶ್ವವಿದ್ಯಾಲಯದಲ್ಲಿ ಬೋಧಕ ಹುದ್ದೆಗಳ ಕೊರತೆಯಿರುವುದರಿಂದ ಪಿ.ಎಚ್.ಡಿ ಸಾಮಾನ್ಯ ಪ್ರವೇಶ ಪರೀಕ್ಷೆ ತೇರ್ಗಡೆಯಾಗಿ ಅರ್ಹತೆ ಪಡೆದ ಎಲ್ಲಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರನ್ನು ನೇಮಕ ಮಾಡಲು ಸಾಧ್ಯವಾಗುತ್ತಿಲ್ಲ.

ಮೈಸೂರು ವಿಶ್ವವಿದ್ಯಾಲಯವನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ. 13.02.2025 ಮತ್ತು 09.05.2025ರಂದು ಸಭೆಗಳನ್ನು ನಡೆಸಿದ್ದು, ಪ್ರಸ್ತುತ ಇಲ್ಲಿಯವರೆಗೆ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸಮಿತಿಯ ವರದಿ ನಿರೀಕ್ಷಿಸಲಾಗಿದ್ದು, ಸಮಿತಿ ನೀಡುವ ಶಿಫಾರಸ್ಸುಗಳನ್ನು, ಸಚಿವ ಸಂಪುಟದ ಮುಂದೆ ಮಂಡಿಸಿ ವಿಶ್ವವಿದ್ಯಾಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಢಗೊಳ್ಳಲು ಅಗತ್ಯ ಕ್ರಮವನ್ನು ಕೈಗೊಳ್ಳಲಾಗುತ್ತದೆ.

**ಸಂಖ್ಯೆ: ಇಡಿ 110 ಯುಎಂವಿ 2025**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ, ಸಚಿವರು

Scanned with CamScanner